**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 432 ಗ್ರಾಪಂಕಾ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:05.12.2017

## <u>ಅಧಿಕೃತ ಜ್ಞಾಪನ</u>

**ವಿಷಯ:** ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿನಾಂಕ:09.02.2017 ರ ತೀರ್ಪಿನ ಅನ್ವಯ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 182 ಎಸ್‌ಆರ್‌ಆರ್ 2011 ದಿನಾಂಕ:06.05.2017 ರನ್ವಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ 01.07.2017 ರಲ್ಲಿದ್ದಂತೆ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 569 ಗ್ರಾಪಂಅ 2006, ದಿನಾಂಕ 31.03.2008
2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಗ್ರಾಅಪ 374 ಗ್ರಾಪಂಕಾ 2013, ದಿನಾಂಕ 21.02.2014
3. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಪೀಲು ಸಂಖ್ಯೆ: 2368/2011 ರ ದಿನಾಂಕ 09.02.2017 ನಿರ್ದೇಶದನ್ವಯ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ ಸಿಆಸುಇ 182 ಸೇವೆನಿ 2011, ದಿನಾಂಕ 06.05.2017.
4. ಸರ್ಕಾರದ ಸಮ ಪತ್ರ ಸಂಖ್ಯೆ: ದಿನಾಂಕ:25–05–2017 ಮತ್ತು 04.07.2017
5. ಕರ್ನಾಟಕ ಸರ್ಕಾರಿ ನೌಕರರ(ಜೇಷ್ಠತಾ) ನಿಯಮಗಳು–1957

*********

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಉಲ್ಲೇಖ (1) ರಲ್ಲಿನ ಸರ್ಕಾರದ ಆದೇಶದಂತೆ ರಾಜ್ಯದ ಪ್ರತಿ ಗ್ರಾಮ ಪಂಚಾಯತಿಗೆ ಒಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಸೃಜಿಸಲಾಗಿದೆ. ಈ ಹುದ್ದೆಗಳು ಜಿಲ್ಲಾ ವೃಂದದ ಹುದ್ದೆಗಳಾಗಿರುತ್ತವೆ. ಉಲ್ಲೇಖ(2) ರಲ್ಲಿ ದಿನಾಂಕ 31.12.2011 ರಲ್ಲಿದ್ದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆ. ಉಲ್ಲೇಖ (3) ರ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನನ್ವಯ ಜಿಲ್ಲಾ ಪಂಚಾಯತಿ ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಿ, ಬಾಧಿತ ನೌಕರರಿಂದ ಆಕ್ಷೇಪಣೆ/ಸಲಹೆಗಳನ್ನು ಸ್ವೀಕರಿಸಿದ್ದು, ಪರಿಶೀಲಿಸಿದ ನಂತರ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ ಸರ್ಕಾರಕ್ಕೆ ಸಲ್ಲಿಸುವಂತೆ ಉಲ್ಲೇಖ (4) ರ ಪತ್ರಗಳಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಲಾಗಿತ್ತು. ಅದರಂತೆ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಜಿಲ್ಲಾ ಮಟ್ಟದ ಅಂತಿಮ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

-

ಪ್ರಸ್ತುತ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಲ್ಲಿಸಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸೇವಾ ಜೇಷ್ಠತಾ ವಿವರಗಳನ್ನು ಪರಿಶೀಲಿಸಿ, ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, 1957 ರನ್ವಯ ರಾಜ್ಯ ಮಟ್ಟದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕರಡು ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿದ್ದು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಿದೆ.

ಈ ಕರಡು ಜೇಷ್ಠತಾ ಪಟ್ಟಿಯನ್ನು Mysore General Service(Development branch and Local Government Branch) (Recruitment) Rules, 1962 ರನ್ವಯ ಸಿದ್ದಪಡಿಸಿದೆ ಹಾಗೂ ಅದಕ್ಕೆ ಸರ್ಕಾರ ಆಗಿಂದ್ದಾಗ್ಗೆ ತಂದ ತಿದ್ದುಪಡಿಯನ್ವಯ ಮತ್ತು ನೇರ ನೇಮಕಾತಿ ಮಾಡಿದ ದಿನಾಂಕದವರೆಗೆ 5 ಬ್ಲಾಕ್ ಅವಧಿಗಳನ್ನು ಗುರುತಿಸಿ ಸಿದ್ದಪಡಿಸಲಾಗಿದೆ.

| | | |
|---|---|---|
| 1ನೇ ಬ್ಲಾಕ್ | ದಿನಾಂಕ 24.11.1995 ರಿಂದ 03.03.2010 | ಈ ಅವಧಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿದ್ದು, ಪಂಚಾಯತ್ ವಿಸ್ತರಣಾಧಿಕಾರಿಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ ವಿಲೀನಗೊಳಿಸಲಾಗಿರುತ್ತದೆ. |
| 2ನೇ ಬ್ಲಾಕ್ | ದಿನಾಂಕ 04.03.2010 ರಿಂದ 04.04.2010 | ವೃಂದ ಮತ್ತು ನೇಮಕಾತಿ ನಿಯಮಗಳಿಗೆ ದಿನಾಂಕ 04.03.2010 ರಲ್ಲಿ ತಿದ್ದುಪಡಿ ಮಾಡಲಾಗಿದ್ದು, ಈ ಅವಧಿಯಲ್ಲಿ ಗ್ರಾಮ ಪಂಚಾಯತಿ ಗ್ರೇಡ್-1 ಕಾರ್ಯದರ್ಶಿ ವೃಂದದಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಬಡ್ತಿ ನೀಡಲಾಗಿದೆ. |
| 3ನೇ ಬ್ಲಾಕ್ | ದಿನಾಂಕ 05.04.2010 ರಿಂದ 19.12.2013 | ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ನೇರ ನೇಮಕಾತಿ ಮಾಡಲಾಗಿದೆ. |
| 4ನೇ ಬ್ಲಾಕ್ | ದಿನಾಂಕ 20.12.2013 ರಿಂದ 19.02.2014 | ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ನೇರ ನೇಮಕಾತಿ ಮಾಡಲಾಗಿದೆ. |
| 5ನೇ ಬ್ಲಾಕ್ | ದಿನಾಂಕ 20.02.2014 ರಿಂದ ------ | ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸರ್ಕಾರದ ಅಧಿಸೂಚನೆ ಕ್ರಮ ಸಂಖ್ಯೆ: ಗ್ರಾಅಪ/299/ಪಬವ/2013 ದಿ:20-02-2014 ರನ್ವಯ ತಿದ್ದುಪಡಿ ಮಾಡಲಾಗಿದೆ ಹಾಗೂ ನೇರ ನೇಮಕಾತಿ ಕೋಟಾ ಶೇ.65 ರಷ್ಟು ಹಾಗೂ ಬಡ್ತಿ ಕೋಟಾ ಶೇ.35 ರಷ್ಟು ನಿಗಧಿಗೊಳಿಸಲಾಗಿದೆ. |

ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ನೇರ ನೇಮಕಾತಿ ಮತ್ತು ಬಡ್ತಿ ಹೊಂದಿದ ನೌಕರರುಗಳ ಹೆಸರುಗಳು ಈ ಕರಡು ಜೇಷ್ಠತಾ ಪಟ್ಟಿಯಲ್ಲಿ ಸೇರದಿದ್ದರೆ, ಹೆಸರಿನ ಮುಂದೆ ನಮೂದಾಗಿರುವ ವಿವರಗಳಲ್ಲಿ ತಪ್ಪಿದ್ದರೆ ಅಥವಾ ಜೇಷ್ಠತೆಯನ್ನು ನಿಗದಿಪಡಿಸಿರುವ ಬಗ್ಗೆ ಆಕ್ಷೇಪಣೆಗಳಿದ್ದರೆ, ಬಾಧಿತರಾಗುವ ನೌಕರರು ಈ ಅಧಿಕೃತ

-

ಜ್ಞಾಪನವು ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗೆ ಆಕ್ಷೇಪಣೆ/ಸಲಹೆಗಳನ್ನು ಲಿಖಿತವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,ಬಹುಮಹಡಿ ಕಟ್ಟಡ, ಬೆಂಗಳೂರು-1 ಇವರಿಗೆ ಸಲ್ಲಿಸುವಂತೆ ತಿಳಿಸಿದೆ. ಹಾಗೂ ಇಲಾಖಾ ಮಿಂಚಂಚೆ ವಿಳಾಸ sogp2011@gmail.com ಗೆ ಸಲ್ಲಿಸಲು ತಿಳಿಸಿದೆ. ದಿನಾಂಕ: 31-11-2011 ರ ಅಂತ್ಯಕ್ಕೆ ಸಿದ್ದಪಡಿಸಲಾಗಿದ್ದ ಹಾಗೂ ಉಲ್ಲೇಖ(2)ರಲ್ಲಿನ ಅಧಿಕೃತ ಜ್ಞಾಪನದಲ್ಲಿ ಪ್ರಕಟಗೊಂಡಿದ್ದ ಅಂತಿಮ ಜೇಷ್ಠತಾ ಪಟ್ಟಿಯು ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ದಾಖಲಾಗಿರುವ ಅರ್ಜಿ ಸಂಖ್ಯೆ: 6801-05/2011, 115-116/2017, 496-530/2015, 3908/2014 ಗಳಲ್ಲಿನ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ಕರಡು ಜೇಷ್ಠತಾ ಪಟ್ಟಿ ಪ್ರಕಟಿಸಿರುವ ಅಂಶವನ್ನು ಸಂಬಂಧಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೆ ತರಲು ಅಧಿಕೃತ ಜಾಲತಾಣಗಳು ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್‌ಗಳು ಸೂಚನ ಫಲಕಗಳಲ್ಲಿ ಪ್ರಕಟಿಸುವಂತೆ ತಿಳಿಸಲಾಗಿದೆ.

(ಸಹಿ) 9/12/17
(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ,ಬೆಂಗಳೂರು ಇವರಿಗೆ ಈ ಅಧಿಕೃತ ಜ್ಞಾಪನದ 100 ಪ್ರತಿಗಳನ್ನು ಮುದ್ರಿಸಿಕೊಡಲು ಕೋರಿದೆ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ.
3) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
5) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
6) ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.